ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01**

ಸಂಖ್ಯೆ:ಇ-ಆಡಳಿತ:ಮಂ.ಹು.ಪ:01/2020-21

ದಿನಾಂಕ:-09-09-2020

**-: ಜ್ಞಾಪನಾ :-**

ವಿಷಯ:- ಶಾಲಾವಾರು ಮಂಜೂರಾದ ಹುದ್ದೆ, ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಮಾಹಿತಿ ಹಾಗೂ ಖಾಲಿ ಹುದ್ದೆ ಮಾಹಿತಿ ಪರಿಶೀಲನೆ ಮಾಡುವ ಬಗ್ಗೆ.

ಉಲ್ಲೇಖ:-1) ಈ ಕಛೇರಿ ಪತ್ರ ಸಮ ಸಂಖ್ಯೆ ದಿನಾಂಕ.02.09.2020

2) ಮಾನ್ಯ ಶಿಕ್ಷಣ ಸಚಿವರ ಟಿಪ್ಪಣಿ ಸಂಖ್ಯೆ: ಪ್ರಾ.ಪ್ರೌ.ಸ.ಸ/650/2019-20 ದಿ: 20-8-2020

3) ಮಾನ್ಯ ಶಿಕ್ಷಣ ಸಚಿವರ ಟಿಪ್ಪಣಿ ದಿನಾಂಕ.08.09.2020

------

2020-21 ನೇ ಸಾಲಿನ ವರ್ಗಾವಣಾ ಪ್ರಕ್ರಿಯೆಯನ್ನು ಪ್ರಾರಂಭಿಸಬೇಕಾಗಿರುವುದರಿಂದ ಜಿಲ್ಲೆಗಳಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯಿಂದ ಪ್ರೌಢಶಾಲಾ ಶಿಕ್ಷಕರ ಹುದ್ದೆಗೆ ಪದೋನ್ನತಿ ನೀಡಿದ್ದಲ್ಲಿ ಶಿಕ್ಷಕರ ಸೇವಾ ಮಾಹಿತಿ ತಂತ್ರಾಂಶದಲ್ಲಿ ಖಾಲಿ ಹುದ್ದೆಗಳ ಮಾಹಿತಿಯಲ್ಲಿ ವ್ಯತ್ಯಾಸಗಳು ಉಂಟಾಗುವುದರಿಂದ ಸದರಿ ಬಡ್ತಿ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಲು ಸೂಚಿಸಲಾಗಿತ್ತು.

ಮಾನ್ಯ ಶಿಕ್ಷಣ ಸಚಿವರು ಉಲ್ಲೇಖ(3) ರ ಟಿಪ್ಪಣಿಯಲ್ಲಿನ ಸೂಚನೆಯಂತೆ ಕೆಲವು ಜಿಲ್ಲೆಗಳಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯಿಂದ ಪ್ರೌಢಶಾಲಾ ಶಿಕ್ಷಕರ ಹುದ್ದೆಗೆ ಪದೋನ್ನತಿ ನೀಡುವ ಪ್ರಕ್ರಿಯೆ ಪೂರ್ಣಗೊಂಡಿಲ್ಲದ ಕಾರಣ ಶಿಕ್ಷಕರಿಗೆ ತೊಂದರೆಯಾಗುವುದರಿಂದ ಸದರಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಸೂಚಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ಜಿಲ್ಲೆಗಳಲ್ಲಿ ಬಾಕಿ ಇರುವ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯಿಂದ ಪ್ರೌಢಶಾಲಾ ಶಿಕ್ಷಕರ ಹುದ್ದೆಗೆ ಪದೋನ್ನತಿ ನೀಡುವ ಪ್ರಕ್ರಿಯೆಯನ್ನು ದಿನಾಂಕ.16-09-2020 ರೊಳಗೆ ಪೂರ್ಣಗೊಳಿಸಲು ಸೂಚಿಸಿದೆ.

ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ.

**ರವರಿಗೆ,**

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಸೂಕ್ತ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ತಾಲ್ಲೂಕುಗಳ ಕ್ಷೇತ್ರಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಸೂಕ್ತ ಕ್ರಮಕ್ಕಾಗಿ

**ಪ್ರತಿಯನ್ನು:-**

1. ಅಪರ ಆಯುಕ್ತರು, ಧಾರವಾಡ ಮತ್ತು ಕಲ್ಬುರ್ಗಿ ಇವರಿಗೆ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ
2. ನಿರ್ದೇಶಕರು(ಪ್ರಾಥಮಿಕ ಶಿಕ್ಷಣ), ಆಯುಕ್ತರ ಕಛೇರಿ, ಬೆಂಗಳೂರು., ಇವರಿಗೆ ಮಾಹಿತಿಗಾಗಿ
3. ನಿರ್ದೇಶಕರು(ಪ್ರೌಢ ಶಿಕ್ಷಣ), ಆಯುಕ್ತರ ಕಛೇರಿ, ಬೆಂಗಳೂರು, ಇವರಿಗೆ ಮಾಹಿತಿಗಾಗಿ
4. ಕಛೇರಿ ಪ್ರತಿ.